ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

5

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 20/4/2021

# ಕೊರೊನಾ ಹಿನ್ನೆಲೆ; ಸಮಿತಿಗಳ ಸಭೆ ರದ್ದು

ಬೆಂಗಳೂರು: ರಾಜ್ಯದಲ್ಲಿ ಕೊರೊನಾ ಎರಡನೇ ಅಲೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಏ.26 ರಿಂದ ವಿಧಾನ ಮಂಡಲದ ವಿವಿಧ ಸಮಿತಿಗಳ ಸಭೆಗಳನ್ನು ಮುಂದಿನ ಆದೇಶದವರೆಗೂ ಸ್ಥಗಿತಗೊಳಿಸಲಾಗಿದೆ ಎಂದು ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ತಿಳಿಸಿದ್ದಾರೆ.

ದೇಶದಲ್ಲಿ ಕೊವಿಡ್19 ಪರಿಸ್ಥಿತಿಯನ್ನು ತಡೆಗಟ್ಟುವುದು ಮತ್ತು ಜನಪ್ರತಿನಿಧಿಗಳ ಪಾತ್ರ ಮತ್ತು ಜವಾಬ್ದಾರಿ ಕುರಿತು ದೇಶದ ಎಲ್ಲ ವಿಧಾನ ಮಂಡಲಗಳ ಪೀಠಾಸೀನಾಧಿಕಾರಿಗಳು ಮತ್ತು ಪ್ರಮುಖರೊಂದಿಗೆ ಲೋಕಸಭಾಧ್ಯಕ್ಷ ಓಂ ಬಿರ್ಲಾ ನಡೆಸಿದ ವಿಡಿಯೊ ಸಂವಾದದಲ್ಲಿ ಪಾಲ್ಗೊಂಡು ಸಭೆಯ ತೀರ್ಮಾನಗಳ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿರುವ ಅವರು, ಎಲ್ಲ ಶಾಸಕರು ಕೊವಿಡ್ ಲಸಿಕೆಯನ್ನು ಪಡೆಯಲು ಸೂಚಿಸಲಾಗಿದೆ.

ವಿಧಾನಸಭೆ ಸದಸ್ಯರು ಸರ್ಕಾರ ಹೊರಡಿಸುವ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸುವುದು ಮತ್ತು ಕೊರೊನಾ ನಿಯಂತ್ರಣಕ್ಕೆ ಶ್ರಮಿಸಬೇಕೆಂದು ತಿಳಿಸಲಾಗಿದೆ. ಶಾಸಕರು ತಮ್ಮ ಕ್ಷೇತ್ರಗಳಲ್ಲಿಯೇ ಉಳಿದು ಕೊರೊನಾ ನಿಯಂತ್ರಿಸುವುದು ಹಾಗೂ ಜನ ಜಾಗೃತಿ ಮೂಡಿಸುವ ಕೆಲಸ ಮಾಡುವಂತೆ ಸೂಚಿಸಲಾಗಿದೆ. ಈ ಹಿನ್ನೆಲೆಯಲ್ಲಿ ವಿಧಾನ ಮಂಡಲದ ವಿವಿಧ ಸಮಿತಿಗಳ ಸಭೆಯಲ್ಲಿ ಏ.26 ರಿಂದ ಮುಂದಿನ ಆದೇಶದವರೆಗೂ ಸ್ಥಗಿತಗೊಳಿಸಲಾಗಿದೆ ಎಂದು ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ತಿಳಿಸಿದ್ದಾರೆ.



ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಮಾಹಿತಿ

**ರಾಜಕೀಯ ಮೀರಿ ಕೆಲಸ ಮಾಡಬೇಕು:** ದೇಶದಲ್ಲಿ ಮಹಾಮಾರಿಯಾಗಿ ಕಾಡುತ್ತಿರುವ ಕೊರೊನಾ ಹೋಗಲಾಡಿಸಲು ಎಲ್ಲರೂ ರಾಜಕೀಯ ಮೀರಿ ಕೆಲಸ ಮಾಡಬೇಕು ಎಂಬ ಅಭಿಪ್ರಾಯ ದೇಶದ ಸ್ಪೀಕರ್‌ಗಳ ಸಭೆಯಲ್ಲಿ ವ್ಯಕ್ತವಾಗಿದೆ ಎಂದು ಗೃಹ ಮತ್ತು ಕಾನೂನು ಸಚಿವ ಬಸವರಾಜ್ ಬೊಮ್ಮಾಯಿ ತಿಳಿಸಿದ್ದಾರೆ.

ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕೊರೊನಾ ಮಹಾಮಾರಿ ಹೋಗಲಾಡಿಸಲು ಜನ ಪ್ರತಿನಿಧಿಗಳು ಸರ್ಕಾರದೊಂದಿಗೆ ಕೈ ಜೋಡಿಸಬೇಕು. ಶಾಸಕರು, ವಿಧಾನ ಪರಿಷತ್ ಸದಸ್ಯರು, ಜಿಲ್ಲಾ ಪಂಚಾಯತಿ ಸದಸ್ಯರು ಜನ ಜಾಗೃತಿ ಮೂಡಿಸುವ ಕೆಲಸ ಮಾಡಬೇಕು ಎಂದು ಹೇಳಿದ್ದಾರೆ. ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ ಸರ್ಕಾರದಿಂದ ಜಾರಿಯಾಗುವ ಎಲ್ಲ ಮಾರ್ಗಸೂಚಿಗಳನ್ನು ಜನರಿಗೆ ತಲುಪಿಸುವ ಕೆಲಸ ಮಾಡಬೇಕು. ರಾಜಕೀಯ ಮೀರಿ ಜನಪ್ರತಿನಿಧಿಗಳು ಕೆಲಸ ಮಾಡಬೇಕು ಎಂಬ ಚಿಂತನೆ ಚರ್ಚೆಯಾಗಿದೆ. ವಿಶ್ವದಲ್ಲಿಯೇ ಈ ಮಹಾಮಾರಿ ಕಾಡುತ್ತಿದೆ. ಹೀಗಾಗಿ ನಾವೆಲ್ಲರೂ ರಾಜಕೀಯ ಮೀರಿ ಕೆಲಸ ಮಾಡಬೇಕು ಎನ್ನುವ ವಿಚಾರವನ್ನು ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರು ಸಲಹೆ ನೀಡಿದ್ದಾರೆ ಎಂದು ಬೊಮ್ಮಾಯಿ ತಿಳಿಸಿದರು.